# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 311 |
| ಸದಸ್ಯರ ಹೆಸರು | : | ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ |
| ಉತ್ತರಿಸುವ ದಿನಾಂಕ | : | 15.12.2021 |
| ಉತ್ತರಿಸುವ ಸಚಿವರು | : | ಸಮಾಜ ಕಲ್ಯಾಣ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಾರವಾರ ಜಿಲ್ಲೆಯ ಕೆಲವೊಂದು ತಾಲ್ಲೂಕಿನಲ್ಲಿ ಕಳೆದ 5 ವರ್ಷಗಳಿಂದ ಇಲ್ಲಿಯವರೆಗೆ ಬಹಳಷ್ಟು ಜನರಿಗೆ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡದ ಸುಳ್ಳು ಜಾತಿ ಪ್ರಮಾಣ ಪತ್ರಗಳನ್ನು ನೀಡಲಾಗಿದೆ ಎಂದು ದೂರುಗಳು ದಾಖಲಾಗಿರುವ ಸಂಗತಿ ಸರಕಾರದ ಗಮನಕ್ಕೆ ಬಂದಿದೆಯೇ? (ವಿವರ ನೀಡುವುದು) | ಬಂದಿದೆ.<br>ಕಾರವಾರ ಜಿಲ್ಲೆಯಲ್ಲಿ ಒಟ್ಟು 23 ದೂರುಗಳು ದಾಖಲಾಗಿದ್ದು, ಸೂಕ್ತ ತೀರ್ಮಾನಕ್ಕೆ ಪ್ರಕರಣಗಳು ಜಿಲ್ಲಾ ಜಾತಿ ಪರಿಶೀಲನಾ ಸಮಿತಿ, ಕಾರವಾರ ಇಲ್ಲಿ ಬಾಕಿ ಇರುತ್ತವೆ. ವಿವರವನ್ನು ಅನುಬಂಧ-1ರಲ್ಲಿ ನೀಡಲಾಗಿದೆ. |
| ಆ) | ಸುಳ್ಳು ಜಾತಿ ಪ್ರಮಾಣ ಪತ್ರ ನೀಡಿರುವ ತಾಲ್ಲೂಕುಗಳ್ಯಾವುವು (ತಾಲೂಕುವಾರು /ಜಿಲ್ಲಾವಾರು ತಹಶೀಲ್ ದಾರರ ಹೆಸರಿನೊಂದಿಗೆ ಸದ್ಯ ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳದ ವಿವರ ನೀಡುವುದು | ಒಟ್ಟು 45 ಪ್ರಕರಣಗಳಲ್ಲಿ ಕ್ರಿಮಿನಲ್ ಮೊಕದ್ದಮ್ಮೆ ದಾಖಲಿಸಲಾಗಿದೆ. ವಿವರಗಳನ್ನು ಅನುಬಂಧ '2' ರಲ್ಲಿ ನೀಡಲಾಗಿದೆ. |
| ಇ) | ಕಳೆದ 5 ವರ್ಷಗಳಲ್ಲಿ ಎಷ್ಟು ಜನರಿಗೆ ನೀಡಲಾಗಿದೆ; ಯಾವ ಆಧಾರದ ಮೇಲೆ ಜಾತಿ ಪ್ರಮಾಣ ಪತ್ರ ನೀಡಲಾಗಿದೆ; ಸದ್ಯ ಸಂಬಂಧಿಸಿದ ತಹಶೀಲದಾರರು ಈಗ ಕರ್ತವ್ಯ ನಿರ್ವಹಿಸುತ್ತಿರುವ ಸ್ಥಳದೊಂದಿಗೆ ಅವರ ಮೇಲೆ ಸರಕಾರ ಯಾವ ಕ್ರಮ ಕೈಗೊಂಡಿರುತ್ತದೆ; ಒಂದು ವೇಳೆ ಕ್ರಮ ಕೈಗೊಳ್ಳದಿದ್ದಲ್ಲಿ ಯಾವ ಕಾರಣಕ್ಕಾಗಿ ಈ ರೀತಿ ಸರಕಾರಿ ಕರ್ತವ್ಯದಲ್ಲಿ ಅಪರಾಧ ಮಾಡಿದರೂ ಕ್ರಮ ಕೈಗೊಳ್ಳದೆ ಇರಲು ಕಾರಣವೇನು? (ಸಂಪೂರ್ಣ ವಿವರ ನೀಡುವುದು) | ಸುಳ್ಳು ಜಾತಿ ಪ್ರಮಾಣ ಪತ್ರವನ್ನು ನೀಡಿರುವ ಸಂಬಂಧಪಟ್ಟ ತಹಶೀಲ್ದಾರುಗಳ ವಿವರಗಳನ್ನು ಪತ್ತೆ ಹಚ್ಚಿ (ಅವರು ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸ್ಥಳ) ಅವರ ವಿರುದ್ಧ ಸೂಕ್ತ ಶಿಸ್ತು ಕ್ರಮ ಜರುಗಿಸುವಂತೆ ಕಂದಾಯ ಇಲಾಖೆಗೆ ಈಗಾಗಲೇ ತಿಳಿಸಲಾಗಿದೆ. |

ಸಕಇ 280 ಎಸ್ ಎಡಿ 2021

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಹಾಗೂ ಹಿಂದುಳಿದ
ವರ್ಗಗಳ ಕಲ್ಯಾಣ ಸಚಿವರು